## ಕರ್ನಾಟಕ ಸರ್ಕಾರದ ನಡವಳಿಗಳು

ವಿಷಯ: 2021-22ನೇ ಸಾಲಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕೇಂದ್ರ ಕಛೇರಿ ಹಾಗೂ ಅದರ ವ್ಯಾಪ್ತಿಯಡಿಯ ಅಧೀನ ಕಛೇರಿಗಳ ವೇತನೇತರ ವೆಚ್ಚಕ್ಕಾಗಿ ತೃತೀಯ ತ್ರೈಮಾಸಿಕ ಕಂತಿನ ಅನುದಾನ ಬಿಡುಗಡೆ ಮಾಡುವ ಕುರಿತು.

ಓದಲಾಗಿದೆ: ಆರ್ಥಿಕ ಇಲಾಖೆಯ ಅರ್ಥಿಕ ಅಧಿಕಾರ ಪ್ರತ್ಯಾಯೋಜನೆ ಸಂಖ್ಯೆ:ಎಫ್ ಡಿ:1 ಟಿ ಎಫ್ ಪಿ: 2021, ದಿನಾಂಕ: 30-09-2021.

ಪೀಠಿಕೆ:

2021-22ನೇ ಸಾಲಿನ ರಾಜ್ಯದ ಆಯವ್ಯಯದಲ್ಲಿ ಲೆಕ್ಕ ಶೀರ್ಷಿಕೆ:2215-01-001-1-03 (ಯೋಜನೇತರ) ಅಡಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ಕೇಂದ್ರ ಕಛೇರಿ ಹಾಗೂ ಅದರ ವ್ಯಾಪ್ತಿಯಡಿಯಲ್ಲಿನ ಅಧೀನ ಕಛೇರಿಗಳ ವೇತನೇತರ ವೆಚ್ಚಕ್ಕಾಗಿ ಒಟ್ಟು ರೂ.6181.00 ಲಕ್ಷಗಳನ್ನು ನಿಗದಿಪಡಿಸಲಾಗಿರುತ್ತದೆ. ಸದರಿ ಅನುದಾನದಲ್ಲಿ ತೃತೀಯ ತ್ರೈಮಾಸಿಕ ಕಂತಿಗೆ ಸಂಬಂಧಿಸಿದಂತೆ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವ್ಯಾಪ್ತಿಯಲ್ಲಿನ ಕೇಂದ್ರ ಕಛೇರಿ, 04 ವೃತ್ತ ಕಛೇರಿಗಳು, 32 ವಿಭಾಗ ಕಛೇರಿಗಳು ಹಾಗೂ 176 ಉಪವಿಭಾಗ ಕಛೇರಿಗಳ ವೇತನೇತರ ವೆಚ್ಚಕ್ಕಾಗಿ ರೂ.5,98,25,000/- ಗಳ ಅನುದಾನವನ್ನು ಖಜಾನೆ-02 ರ ಮೂಲಕ ಬಿಡುಗಡೆ ಮಾಡಲು ನಿರ್ಣಯಿಸಲಾಗಿದೆ. ಆದ್ದರಿಂದ ಈ ಕೆಳಕಂಡ ಆದೇಶ:-

ಸರ್ಕಾರದ ಆದೇಶ ಸಂಖ್ಯೆ:ಗ್ರಾಕುನೀ&ನೈಇ/ACCTONSG/1/487663(ಇ-ಆಫೀಸ್)/2021, ಬೆಂಗಳೂರು, ದಿನಾಂಕ: 20-11-2021

ಪೀಠಿಕೆಯಲ್ಲಿನ ವಾಸ್ತವಾಂಶಗಳ ಹಿನ್ನೆಲೆಯಲ್ಲಿ, 2021-22ನೇ ಸಾಲಿನಲ್ಲಿ ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆಯ ವ್ಯಾಪ್ತಿಯಲ್ಲಿನ ಕೇಂದ್ರ ಕಛೇರಿ, 04 ವೃತ್ತ ಕಛೇರಿಗಳು, 32 ವಿಭಾಗ ಕಛೇರಿಗಳು ಹಾಗೂ 176 ಉಪ ವಿಭಾಗ ಕಛೇರಿಗಳಿಗೆ ವೇತನೇತರ ವೆಚ್ಚಕ್ಕಾಗಿ ಈ ಕೆಳಕಂಡ ಲೆಕ್ಕ ಉಪಶೀರ್ಷಿಕೆಗಳಡಿ ತೃತೀಯ ತ್ರೈಮಾಸಿಕ ಕಂತಿನಡಿ ಒಟ್ಟು ರೂ.5,98,25,000/- ಗಳ (ರೂಪಾಯಿ ಐದು ಕೋಟಿ ತೊಂಭತ್ತೆಂಟು ಲಕ್ಷದ ಇಪ್ಪತ್ತೈದು ಸಾವಿರಗಳು ಮಾತ್ರ) ಅನುದಾನವನ್ನು ಈ ಕೆಳಗಿನಂತೆ ಬಿಡುಗಡೆ ಮಾಡಲು ಸರ್ಕಾರವು ಹರ್ಷಿಸುತ್ತದೆ:-

| ಕ್ರ.ಸಂ. | ಲೆಕ್ಕ ಉಪಶೀರ್ಷಿಕೆ | ವೆಚ್ಚದ ವಿವರ | ತೃತೀಯ ತ್ರೈಮಾಸಿಕ ಕಂತಿನ ಅನುದಾನ ರೂ.ಲಕ್ಷಗಳಲ್ಲಿ |
|---|---|---|---|
| 1 | 2215-01-001-1-03-034 (ಯೋಜನೇತರ) | ಗುತ್ತಿಗೆ/ಹೊರಗುತ್ತಿಗೆ ವೇತನ | 314.25 |
| 2 | 2215-01-001-1-03-071 (ಯೋಜನೇತರ) | ಕಟ್ಟಡ ವೆಚ್ಚಗಳು | 112.50 |
| 3 | 2215-01-001-1-03-195 (ಯೋಜನೇತರ) | ಸಾರಿಗೆ ವೆಚ್ಚಗಳು | 171.50 |
| | | ಒಟ್ಟು | 598.25 |

2. ಈ ಆದೇಶವನ್ನು ಆರ್ಥಿಕ ಇಲಾಖೆಯ ಅರ್ಥಿಕ ಅಧಿಕಾರ ಪ್ರತ್ಯಾಯೋಜನೆಯ ಸಂಖ್ಯೆ:ಎಫ್ ಡಿ:1 ಟಿ ಎಫ್ ಪಿ:2021, ದಿನಾಂಕ: 30-09-2021 ರನ್ವಯ ಹೊರಡಿಸಲಾಗಿದೆ.

3. ಈ ಆದೇಶದಲ್ಲಿ ಬಿಡುಗಡೆ ಮಾಡಿರುವ ಅನುದಾನವನ್ನು ಈ ಕೆಳಕಂಡ ಷರತ್ತುಗಳಿಗೊಳಪಟ್ಟು ವಿನಿಯೋಗಿಸಲು ಆದೇಶಿಸಿದೆ:-

ಷರತ್ತುಗಳು:

1. ಈ ಅನುದಾನವನ್ನು ಕರ್ನಾಟಕ ಸಾರ್ವಜನಿಕ ಸಂಗ್ರಹಣೆಗಳಲ್ಲಿ ಪಾರದರ್ಶಕತೆ ಅಧಿನಿಯಮ, 1999 ಮತ್ತು ತತ್ಸಂಬಂಧಿತ ನಿಯಮಗಳು, 2000, ಕರ್ನಾಟಕ ಆರ್ಥಿಕ ಸಂಹಿತೆ-1958 ಹಾಗೂ ಚಾಲ್ತಿ ಇರುವ ಇಲಾಖಾ ಇತರೆ ನಿಯಮಗಳನ್ವಯ ವಿನಿಯೋಗಿಸತಕ್ಕದ್ದು.
2. ಖಜಾನೆ-2 ತಂತ್ರಾಂಶದ ಮುಖಾಂತರ ಸಂಬಂಧಿಸಿದ ಕಛೇರಿಗಳ ವಿಷಯ ನಿರ್ವಾಹಕರು ಬಿಲ್ಲುಗಳನ್ನು ತಯಾರಿಸಬೇಕು.
3. ಈ ರೀತಿ ತಯಾರಿಸಲಾದ ಬಿಲ್ಲುಗಳೊಂದಿಗೆ ಆಯಾಯ ಕಛೇರಿಯ ನಿಯೋಜಿತ ಪರೀಕ್ಷಕರು ಪರೀಕ್ಷಿಸಿ, ಬಟವಾಡೆ ಅಧಿಕಾರಿಗಳಿಗೆ ಅನುಮೋದನೆಗಾಗಿ ಕಳುಹಿಸಿಕೊಡತಕ್ಕದ್ದು.

4. ತದನಂತರ, ಅಂತಿಮ ಬಿಲ್ಲನ್ನು ತಯಾರಿಸಿ, ಸಹಿಯೊಂದಿಗೆ ಸಂಬಂಧಿಸಿದ ಕಛೇರಿಯ ಮುಖ್ಯಸ್ಥರಿಗೆ ಮೇಲುರುಜುವಿಗೆ ಕಳುಹಿಸಿಕೊಡತಕ್ಕದ್ದು.
5. ಕೇಂದ್ರ ಕಛೇರಿಯಲ್ಲಿ ಖಜಾನೆ-2ರ ಮುಖಾಂತರ ತಯಾರಿಸಲಾದ ಸಾದಿಲ್ವಾರು ಬಿಲ್ಲುಗಳಿಗೆ ಆಯುಕ್ತರು, ಗ್ರಾ.ಕು.ನೀ.&ನೈ.ಇಲಾಖೆ ಇವರು ಮೇಲು ರುಜು ಅಧಿಕಾರಿಗಳಾಗಿರುತ್ತಾರೆ.
6. ಈ ಆದೇಶದಲ್ಲಿ ಬಿಡುಗಡೆ ಮಾಡಲಾಗುತ್ತಿರುವ ಅನುದಾನವನ್ನು ಖಜಾನೆ-2ರ ಮುಖಾಂತರ ಸಂಬಂಧಿಸಿದ ಅಧಿಕಾರಿ/ಸಿಬ್ಬಂದಿ/ಫಲಾನುಭವಿಗಳ ಬ್ಯಾಂಕ್ ಖಾತೆಗಳಿಗೆ ಜಮೆ ಮಾಡಲು ಕ್ರಮವಹಿಸತಕ್ಕದ್ದು.
7. ಸಂಬಂಧಿಸಿದ ಬಟವಾಡೆ ಅಧಿಕಾರಿಯು ಖಜಾನೆ-2 ರ ಮುಖಾಂತರ ತಯಾರಿಸಲಾದ ಕೆ.ಎಫ್.ಸಿ.ಯ ನಮೂನೆ 62(ಬಿ)ಯೊಂದಿಗೆ ಲೆಕ್ಕ ಮರುಹೊಂದಾಣಿಕೆ ಮಾಡಿಕೊಳ್ಳತಕ್ಕದ್ದು.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

20/11/2024

ಸರ್ಕಾರದ ಉಪ ಕಾರ್ಯದರ್ಶಿ(ಆಡಳಿತ),
ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ಇಲಾಖೆ.

ಪ್ರತಿಯನ್ನು:

1. ಮಹಾಲೇಖಪಾಲರು (ಲೆಕ್ಕಪತ್ರ), ಕರ್ನಾಟಕ, ಬೆಂಗಳೂರು.
2. ಮಹಾಲೇಖಪಾಲರು(ಎಯು-1) ಕರ್ನಾಟಕ, ಬೆಂಗಳೂರು.
3. ಮಹಾಲೇಖಪಾಲರು(ಎಯು-2) ಕರ್ನಾಟಕ, ಬೆಂಗಳೂರು.
4. ಉಪ ಮಹಾಲೇಖಪಾಲರು ಮಹಾಲೇಖಪಾಲರು (ಎಯು-1) ರವರ ಶಾಖಾ ಕಛೇರಿ, ಕಾಲೇಜು ರಸ್ತೆ, ಧಾರವಾಡ.
5. ರಾಜ್ಯದ ಎಲ್ಲಾ 30 ಜಿಲ್ಲಾ ಪಂಚಾಯತಿಗಳ ಅಧ್ಯಕ್ಷರುಗಳು.
6. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ ಹಾಗೂ ಅಭಿವೃದ್ಧಿ ಆಯುಕ್ತರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
7. ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ, ಆರ್ಥಿಕ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ವಿಧಾನಸೌಧ, ಬೆಂಗಳೂರು.
8. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಯೋಜನಾ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿಗಳ ಕಟ್ಟಡ, ಬೆಂಗಳೂರು.
9. ಸರ್ಕಾರದ ಪ್ರಧಾನ ಕಾರ್ಯದರ್ಶಿ, ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ, ಬಹುಮಹಡಿ ಕಟ್ಟಡ, ಬೆಂಗಳೂರು.
10. ಆಯುಕ್ತರು, ಗ್ರಾ.ಕು.ನೀ.&ನೈ.ಇಲಾಖೆ, ಕಾವೇರಿ ಭವನ, ಬೆಂಗಳೂರು.
11. ಮುಖ್ಯ ಅಭಿಯಂತರು, ಗ್ರಾ.ಕು.ನೀ.&ನೈ.ಇಲಾಖೆ, ಕಾವೇರಿ ಭವನ, ಬೆಂಗಳೂರು.
12. ರಾಜ್ಯದ ಎಲ್ಲಾ 30 ಜಿಲ್ಲಾಪಂಚಾಯತ್ ಗಳ ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿಗಳು,
13. ನಿರ್ದೇಶಕರು, ಖಜಾನೆ ಇಲಾಖೆ, ಬೆಂಗಳೂರು.
14. ವಿಶೇಷಾಧಿಕಾರಿ(ಜಿಪಂ) ಹಾಗೂ ಸರ್ಕಾರದ ಪದನಿಮಿತ್ತ ಉಪಕಾರ್ಯದರ್ಶಿ, ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
15. ಜಂಟಿ ನಿರ್ದೇಶಕರು, ರಾಜ್ಯ ಹುಜೂರ್ ಖಜಾನೆ, ಖಜಾನೆ ಇಲಾಖೆ, ಬೆಂಗಳೂರು.
16. ಆಂತರಿಕ ಆರ್ಥಿಕ ಸಲಹೆಗಾರರು, ಗ್ರಾ.ಅ.&ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು.
17. ಅಧೀಕ್ಷಕ ಅಭಿಯಂತರರು, ಗ್ರಾಮೀಣ ಕುಡಿಯುವ ನೀರು ಮತ್ತು ನೈರ್ಮಲ್ಯ ವೃತ್ತ, 04 ವೃತ್ತ ಕಛೇರಿಗಳು,
18. ಜಿಲ್ಲಾ ಖಜಾನಾಧಿಕಾರಿಗಳು, ರಾಜ್ಯದ ಎಲ್ಲಾ 30 ಜಿಲ್ಲೆಗಳು,
19. ಮುಖ್ಯ ಲೆಕ್ಕಾಧಿಕಾರಿಗಳು, ಗ್ರಾ.ಕು.ನೀ. & ನೈ.ಇಲಾಖೆ, ಕಾವೇರಿ ಭವನ, ಬೆಂಗಳೂರು.
20. ರಾಜ್ಯದ ಎಲ್ಲಾ 30 ಜಿಲ್ಲಾ ಪಂಚಾಯತ್ ಗಳ ಮುಖ್ಯ ಲೆಕ್ಕಾಧಿಕಾರಿಗಳು.
21. ಮುಖ್ಯ ಸಂಪಾದಕರು ಮತ್ತು ಸಂಪರ್ಕಾಧಿಕಾರಿ "ಕರ್ನಾಟಕ ವಿಕಾಸ", ಗ್ರಾ.ಅ.&ಪಂ.ರಾಜ್ ಇಲಾಖೆ, ಬೆಂಗಳೂರು.

ರಾಜ್ಯದ ಎಲ್ಲಾ 32 ಗ್ರಾ.ಕು.ನೀ.&ನೈ.ವಿಭಾಗ ಕಛೇರಿಗಳ ಕಾರ್ಯಪಾಲಕ ಅಭಿಯಂತರರು (32 ವಿಭಾಗ ಕಛೇರಿಗಳ ಮುಖಾಂತರ ರಾಜ್ಯದ ಎಲ್ಲಾ 176 ಉಪ ವಿಭಾಗ ಕಛೇರಿಗಳಿಗೆ).

23. ಉಪ ನಿರ್ದೇಶಕರು, ಟಿ.ಎನ್.ಎಂ.ಸಿ., ಖಜಾನೆ ಇಲಾಖೆ, ಬೆಂಗಳೂರು.
24. ಸರ್ಕಾರದ ಅಧೀನ ಕಾರ್ಯದರ್ಶಿ, ವೆಚ್ಚ(6)(ಜಿಪಂ), ಆರ್ಥಿಕ ಇಲಾಖೆ, ವಿಧಾನಸೌಧ, ಬೆಂಗಳೂರು.
25. ಶಾಖಾಧಿಕಾರಿ, ರವಾನೆ ಮತ್ತು ಸ್ವೀಕೃತಿ ಶಾಖೆ, ಗ್ರಾ.ಅ.&ಪಂ.ರಾಜ್ ಇಲಾಖೆ, ಬಹುಮಹಡಿ ಕಟ್ಟಡ, ಬೆಂಗಳೂರು (ವಾರದ ಗೆಜೆಟ್ ನಲ್ಲಿ ಪ್ರಕಟಿಸಲು 5 ಪ್ರತಿಗಳು).
26. ರಾಜ್ಯ ಪತ್ರಾಗಾರ ಇಲಾಖೆ (ಬಿಡಿ ಪ್ರತಿ ಶಾಖೆ), ಬೆಂಗಳೂರು.
27. ಗ್ರಾ.ಅ.ಮತ್ತು ಪಂ.ರಾಜ್ ಇಲಾಖೆಯ ಮಾಹಿತಿ ಕೇಂದ್ರ , ಬಹುಮಹಡಿ ಕಟ್ಟಡ, ಬೆಂಗಳೂರು (10 ಪ್ರತಿಗಳು).
28. ಶಾಖಾ ರಕ್ಷಾ ಕಡತ/ ಹೆಚ್ಚುವರಿ ಪ್ರತಿಗಳು.

